# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

KANNADA POST

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 172 | Pages. 2 | Date: 15-05-2025, THURSDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 172 - ಪುಟಗಳು : 2 - 15 ಮೇ 2025 ಗುರುವಾರ Ph: 8762954248 ದರ : ₹1


# ಆಡಳಿತದಲ್ಲಿ ಕನ್ನಡ ಬಳಕೆ ಕಡ್ಡಾಯವಾಗಬೇಕು

## ಮಾತೃಭಾಷಾ ಪ್ರೇಮ ಬೆಳೆಸಿಕೊಳ್ಳಿ : ಪುರುಷೋತ್ತಮ ಬಿಳಿಮಲೆ ಸಲಹೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಆಡಳಿತ ಹಾಗೂ ನಿತ್ಯ ಜೀವನದಲ್ಲಿ ಕನ್ನಡ ಭಾಷೆಯನ್ನು ಶೇ. ನೂರಕ್ಕೆ ನೂರರಷ್ಟು ಬಳಸುವ ಮೂಲಕ ಭಾಷೆ ಉಳಿವಿಗೆ ಕೊಡುಗೆ ನೀಡಬೇಕು ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ಕನ್ನಡ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸರ್ಕಾರ ಕಾಲಕಾಲಕ್ಕೆ ಅನೇಕ ಆದೇಶಗಳನ್ನು ಪ್ರಕಟಿಸಿದೆ. ಆದರೆ ಆಡಳಿತದಲ್ಲಿ ಕನ್ನಡ ಅನುಷ್ಠಾನ ಸಾಧ್ಯವಾಗಿಲ್ಲ. ಇದಕ್ಕೆ ಅನೇಕ ಕಾರಣಗಳಿವೆ ಎಂದು ಅವರು, ಅಧಿಕಾರಿಗಳು ಸೃಜನಶೀಲತೆಯಿಂದ ಸಮರ್ಪಕವಾಗಿ ಅನುಷ್ಠಾನ ಮಾಡಲು ಮಾರ್ಗೋಪಾಯಗಳನ್ನು ಕಂಡುಕೊಳ್ಳಬೇಕು. ಕನ್ನಡ ಪರವಾದ ಕೆಲಸ ಮಾಡಲು ಬದ್ಧರಾಗಿ, ಭಾಷಾಂಧಂತೆ ಹುಟ್ಟು ಹಾಕಬಾರದು, ಭಾಷೆ ಪ್ರೇಮ ಇರಬೇಕು ಎಂದು ತಿಳಿಸಿದರು.

2011ರ ಜನಗಣತಿ ಪ್ರಕಾರ 19,569 ಮಾತೃ ಭಾಷೆಗಳಿವೆ. ದೇಶದ ಶಕ್ತಿ ಬಹುಭಾಷಿಕತೆಯಾಗಿದೆ. ಕನ್ನಡ ಭಾಷೆ ಸೃಜನಶೀಲತೆ ಕಳೆದುಕೊಂಡು ಬರಡು ಭೂಮಿ ಆಗುತ್ತಿದೆ. ಇದನ್ನುಗಂಭೀರವಾಗಿ ಪರಿಗಣಿಸಿ ಭಾಷೆಯನ್ನು ಬಳಸುವ ಉಳಿಸುವ ಹಕ್ಕು ಹಾಗೂ ಕರ್ತವ್ಯ ನಿಮ್ಮದಾಗಿದೆ ಎಂದರು.

ಜಿಲ್ಲೆಯಲ್ಲಿ ಕನ್ನಡ ಭಾಷೆಯನ್ನು ಬಳಸುವ ಮೂಲಕ ಉಳಿಸಿ ರಾಜ್ಯದಲ್ಲಿ ಮಾದರಿ ಆಗಬೇಕು. ಪ್ರಾಧಿಕಾರದ ಮೂಲ ಆಶಯ ಕನ್ನಡ ಭಾಷೆಯನ್ನು ಅಳಿಸಿ ಹಾಕದಂತೆ ಬೆಳೆಸಬೇಕು ಎಂಬುದಾಗಿದೆ ಎಂದರು.



### ಶೇ. 99 ಕನ್ನಡ ಅನುಷ್ಠಾನ

ಜಿಲ್ಲಾಧಿಕಾರಿ ಸಿ. ಸತ್ಯಭಾಮ ಅವರು ಮಾತನಾಡಿ, ಬ್ಯಾಂಕ್ ಹಾಗೂ ಕೇಂದ್ರೀಯ ವಿದ್ಯಾಲಯ ಹೊರತುಪಡಿಸಿ ಜಿಲ್ಲೆಯಲ್ಲಿ ಶೇ. 99ರಷ್ಟು ಕನ್ನಡ ಭಾಷೆ ಅನುಷ್ಠಾನ ಮಾಡಲಾಗಿದೆ. ಇ-ಆಫಿಸ್‌ನಲ್ಲಿಯೂ ಕನ್ನಡ ಬಳಕೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಸರ್ಕಾರಿ ಶಾಲೆಗಳಿಗೆ ದಾನವಾಗಿ ನೀಡಿರುವ ಜಾಗಗಳ ಖಾತೆಗೆ ಈಗಾಗಲೇ ಕ್ರಮ ವಹಿಸಲಾಗಿದೆ. ಅಧ್ಯಕ್ಷರು ನೀಡಿರುವ ಸೂಚನೆಗಳನ್ನು ಪಾಲನೆ ಮಾಡಲಾಗುವುದು ಎಂದು ಹೇಳಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಟಿ. ಗುರುರಾಜ್, ಕಾರ್ಯದರ್ಶಿ ಸಂತೋಷ್ ಹಾನಗಲ್, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ, ಆಪ್ತ ಕಾರ್ಯದರ್ಶಿ ಫಣಿಕುಮಾರ್, ಅಪರ ಜಿಲ್ಲಾಧಿಕಾರಿ ಕೆ.ಟಿ. ಶಾಂತಲ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವೆಂಕಟೇಶ್ ನಾಯ್ಡು ಹಾಗು ಇತರರಿದ್ದರು.

### ಫಲಕ ಅಳವಡಿಕೆಗೆ ಸೂಚನೆ

ರಾಜ್ಯದಲ್ಲಿ ಶತಮಾನ ಕಂಡ 3300 ಶಾಲೆಗಳಿವೆ. ಒಟ್ಟು 49,000 ಶಾಲೆಗಳಲ್ಲಿ 11,750 ಶಾಲೆಗಳಿಗೆ ಹಕ್ಕು ಪತ್ರವಿಲ್ಲ, ಹಿಂದೆ ಶಾಲೆಗಳಿಗೆ ಗ್ರಾಮಸ್ಥರು ಜಾಗವನ್ನು ದಾನವಾಗಿ ನೀಡಿದ್ದಾರೆ. ಅವುಗಳ ಖಾತೆಯಾಗದೆ ಈಗ ತಕಾರಾರು ಆಗುವ ಸಾಧ್ಯತೆಗಳಿವೆ. ಈ ನಿಟ್ಟನಲ್ಲಿ ಜಿಲ್ಲೆಯಲ್ಲಿ ಅಂತಹ ಶಾಲೆಗಳ ಬಗ್ಗೆ ನಿಗಾವಹಿಸಲು ತಿಳಿಸಿದರಲ್ಲದೆ, ಮುಖ್ಯೋಪಾಧ್ಯಾಯರ ಕೊಠಡಿಯಲ್ಲಿ ಪಹಣಿ ಪತ್ರವನ್ನು ಫಲಕ ರೂಪದಲ್ಲಿ ಅಳವಡಿಸಲು ತಿಳಿಸಿದರು.

ಬ್ಯಾಂಕ್‌ಗಳಲ್ಲಿ ಜನಸಾಮಾನ್ಯರಿಗೆ ಅರ್ಥವಾಗುವ ರೀತಿಯಲ್ಲಿ ಸ್ಥಳೀಯ ಭಾಷೆ ಬಳಸಿ ವ್ಯವಹಾರ ಮಾಡಲು ನೆರವಾಗಲು ಅಧಿಕಾರಿ ಹಾಗೂ ಸಿಬ್ಬಂದಿ ಸ್ಥಳೀಯ ಭಾಷೆಯಾದ ಕನ್ನಡವನ್ನು ಕಡ್ಡಾಯವಾಗಿ ಬಳಸುವಂತೆ ಕ್ರಮ ವಹಿಸಲು ಸೂಚಿಸಿದರು.



ನಾಮಫಲಕಗಳಲ್ಲಿ ಹೆಸರಿನ ಜೊತೆಗೆ ಊರಿನ ಹೆಸರು ಹಾಕಬೇಕು. ಈ ನಿಟ್ಟನಲ್ಲಿ ನಗರಸಭೆ ಅಧಿಕಾರಿಗಳು ಎಚ್ಚರವಹಿಸಿ. ಇಂಗ್ಲಿಷ್ ಮೋಹವಿದ್ದರು ಹೃದಯಕ್ಕೆ ಹತ್ತಿರವಾದ ಮಾತೃಭಾಷೆ ಕನ್ನಡದ ಬಗ್ಗೆ ಕಳಕಳಿ ಇರಬೇಕು ಎಂದು ತಿಳಿಸಿದರು.

### ಭಾಷೆ ಸ್ಥಿತಿಗತಿ ಅರಿಯಲು ಜಿಲ್ಲಾ ಪ್ರವಾಸ

ಹಾಸನ: ಕನ್ನಡದ ಹೃದಯ ಭಾಗದಲ್ಲಿ ಹಾಸನ ಇರುವುದರಿಂದ ಭಾಷೆಯ ಸಾಕಷ್ಟು ಅಭಿವೃದ್ಧಿ ಕೆಲಸಗಳು ಇಲ್ಲಿ ಆಗುತ್ತಿವೆ, ಹಲವು ವರ್ಷಗಳಿಂದ ಕನ್ನಡ ಅನುಷ್ಠಾನ ಪರಿಶೀಲನೆಗೋಸ್ಕರ ಎಲ್ಲಾ ಜಿಲ್ಲಾ ಕೇಂದ್ರಗಳಿಗೆ ಭೇಟಿ ನೀಡುತ್ತಿದ್ದೇವೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಹೇಳಿದರು.

ಸುದ್ದಿಗೋಷ್ಟಿಯಲ್ಲಿ ಬುಧವಾರ ಮಾತನಾಡಿ, ರಾಜ್ಯದ 9 ಜಿಲ್ಲಾ ಕೇಂದ್ರಗಳಿಗೆ ಭೇಟಿ ನೀಡಿ ಅಲ್ಲಿನ ಅಧಿಕಾರಿಗಳೊಂದಿಗೆ ಚರ್ಚಿಸಿ ಕನ್ನಡ ಅಭಿವೃದ್ಧಿಅನುಷ್ಠಾನ ಹೇಗೆ ಆಗಿದೆ ಎಂಬುದನ್ನು ಪರಿಶೀಲಿಸಿದ್ದೇನೆ ಎಂದರು.

ನಾಮಫಲಕಗಳಲ್ಲಿ ರಾಜ್ಯದಲ್ಲಿರುವ ಎಲ್ಲಾ ಗ್ರಾಮಗಳ ಹೆಸರನ್ನು ಹಾಕುವುದರ ಮೂಲಕ ಸುಮಾರು 71,000 ಕನ್ನಡ ಪದಗಳು ಉಳಿಯುತ್ತವೆ ಹಾಗೂ ಬಳಕೆ ಮಾಡಿದಂತೆ ಆಗುತ್ತದೆ. ರಾಜ್ಯದಲ್ಲಿ ಮಾತೃಭಾಷೆ ಕನ್ನಡದಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ 1,32,000 ವಿದ್ಯಾರ್ಥಿಗಳು ಪಿಯುಸಿಯಲ್ಲಿ ಸುಮಾರು 60 ರಿಂದ 62 ಸಾವಿರ ವಿದ್ಯಾರ್ಥಿಗಳು ಅನುತ್ತೀರ್ಣರಾಗಿದ್ದಾರೆ. ಮಾತೃಭಾಷೆಯಲ್ಲಿ ವಿದ್ಯಾರ್ಥಿಗಳು ಅನುತ್ತೀರ್ಣರಾಗುತ್ತಿರುವುದು ಬೇಸರ ವಿಚಾರ. ಇದಕ್ಕೆ ಕಾರಣ ಏನೆಂಬುದನ್ನು ಶಿಕ್ಷಣ ಇಲಾಖೆ ಅಧಿಕಾರಿಗಳು ಅರಿಯಬೇಕು ಎಂದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಸರಳ ಕನ್ನಡ ಕಲಿಕೆಗೆ ಹೊಸ ಪಠ್ಯಕ್ರಮವನ್ನು ರೂಪಿಸಿದೆ. ಅದು ವಾರಕ್ಕೆ ಮೂರು ದಿವಸ ತಿಂಗಳಿಗೆ 12 ಗಂಟೆ, ಮೂರು ತಿಂಗಳಿಗೆ 36 ಗಂಟೆ ಹೀಗೆ 36 ಗಂಟೆಗಳಲ್ಲಿ ಕನ್ನಡವನ್ನು ಹೇಳಿಕೊಡುವ ಕ್ರಮವಾಗಿದೆ ಎಂದು ತಿಳಿಸಿದರು.

## ಗ್ರಾಮೀಣ ಪ್ರದೇಶ ಅಭಿವೃದ್ಧಿಗೆ ಆದ್ಯತೆ ನೀಡುವೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಬೇಲೂರು: ಗ್ರಾಮೀಣ ಜನರಿಗೆ ಮೂಲಸೌಲಭ್ಯ ಕಲ್ಪಿಸುವುದು ನನ್ನ ಆದ್ಯತೆ ಎಂದು ಶಾಸಕ ಹೆಚ್.ಕೆ. ಸುರೇಶ್ ಹೇಳಿದರು.

ತಾಲ್ಲೂಕಿನ ಕಳ್ಳೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೆಂಡೆಹಳ್ಳಿ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ 1 ಕೋಟಿ ರೂ. ವೆಚ್ಚದ ಸಮುದಾಯ ಭವನ ನಿರ್ಮಾಣಕ್ಕೆ ಬುಧವಾರ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಮಲೆನಾಡು ಭಾಗದಲ್ಲಿ ಹೆಚ್ಚು ಮಳೆಯಾಗುತ್ತದೆ. ಮಳೆಗಾಲದಲ್ಲಿ ಯಾವುದೇ ಶುಭ ಸಮಾರಂಭ ಮಾಡಲು ಸಾಧ್ಯವಾಗದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ಈ ಭಾಗದಲ್ಲಿ ಒಂದು ಸಮುದಾಯ ಭವನ ನಿರ್ಮಿಸಿಕೊಡುವಂತೆ ಸಾರ್ವಜನಿಕರು ಅನೇಕ ಬಾರಿ ಮನವಿ ಮಾಡಿದ್ದರು.

ಅದರಂತೆ ಲೋಕೋಪಯೋಗಿ ಇಲಾಖೆಯಿಂದ 1 ಕೋಟಿ ರೂ. ಅನುದಾನ ಪಡೆಯಲಾಗಿದೆ. ಮೂರು ಹಂತದ ಕಟ್ಟಡ ಕಟ್ಟುವ ಉದ್ದೇಶ ಹೊಂದಿರುವ ಸಮಿತಿಯವರು ಹೆಚ್ಚುವರಿ ಹಣವನ್ನು ದಾನಿಗಳಿಂದ ಸಂಗ್ರಹಿಸಿ ಕೈ ಜೋಡಿಸಬೇಕು ಎಂದು ಹೇಳಿದರು.

ಗ್ರಾಮೀಣ ಭಾಗದಲ್ಲಿ ಮೂಲಸೌಲಭ್ಯ ಕಾಣದ ಅನೇಕ ಗ್ರಾಮಗಳಿದ್ದು, ಆ ಗ್ರಾಮಗಳ ಕೆರೆ, ಕಟ್ಟೆ ಅಭಿವೃದ್ಧಿ, ಮೂಲ ಸೌಲಭ್ಯಗಳಾದ ಕುಡಿಯುವ ನೀರು, ಚರಂಡಿ, ವಿದ್ಯುತ್ ಮುಂತಾದ ವ್ಯವಸ್ಥೆ ಕಲ್ಪಿಸುವುದರ ಜೊತೆಗೆ ಸಾರ್ವಜನಿಕರ ಅನುಕೂಲಕ್ಕಾಗಿ ಸಮುದಾಯ ಭವನ ನಿರ್ಮಾಣ ಅತ್ಯವಶ್ಯಕ ಎಂದರು.

ಮಲೆನಾಡು ಭಾಗದ ಅಭಿವೃದ್ಧಿಗೆ ಅನುದಾನಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಅನುದಾನ ಬಿಡುಗಡೆ ನಂತರ ದೊಡ್ಡ ಮಟ್ಟದ ಯೋಜನೆ ಕೈಗೊಳ್ಳುವುದಾಗಿ, ಅದುವರೆಗೂ ಲಭ್ಯವಿರುವ ಅನುದಾನದಲ್ಲಿ ಗುಣಮಟ್ಟದ ಕಾಮಗಾರಿ ನಿರ್ವಹಿಸುವುದಾಗಿ ತಿಳಿಸಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಅಬ್ದುಲ್ ಹಕೀಂ ಮಾತನಾಡಿ, ನನ್ನ ಅವಧಿಯಲ್ಲಿಯೇ ಸಮುದಾಯ ಭವನ ನಿರ್ಮಾಣವಾಗಬೇಕು ಎಂಬ ಮಹದಾಸೆ ಇತ್ತು. ಶಾಸಕರು ಸರ್ಕಾರದ ಮಟ್ಟದಲ್ಲಿ ಹೋರಾಡಿ ಅನುದಾನ ಕೊಡಿಸಿದ್ದಾರೆ. ಕ್ಷೇತ್ರದ ಬಗ್ಗೆ ಅಪಾರ ಕಾಳಜಿ ಇಟ್ಟುಕೊಂಡು ಕೆಲಸ ಮಾಡುತ್ತಿರುವ ಅವರಿಗೆ ದೇವರು ಮತ್ತಷ್ಟು ಶಕ್ತಿ ನೀಡಲಿ ಎಂದು ಪ್ರಾರ್ಥಿಸಿದರು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ವಸಂತಕುಮಾರ್, ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ರಾಧ, ಸದಸ್ಯರಾದ ನಿಂಗೇಗೌಡ, ಎ.ಎಲ್. ರೇವಣ್ಣ, ಸದಸ್ಯ ಮಹೇಶ್ ಇದ್ದರು.

## ಯುವಕನ ಕೊಂದು ಪ್ರಪಾತಕ್ಕೆ ಎಸೆದ ದುಷ್ಕರ್ಮಿಗಳು

### ರಸ್ತೆಬದಿ ನಿಂತಿದ್ದ ಕಾರಿನಿಂದ ಪ್ರಕರಣ ಬೆಳಕಿಗೆ : ಸಿಎಂ ಕಾರಿಗೆ ಮೊಟ್ಟೆ ಎಸೆದಿದ್ದ ಆರೋಪಿ ಕೊಲೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್





ಸಕಲೇಶಪುರ: ತಾಲ್ಲೂಕಿನ ಮಾಗೇರಿ ಸಮೀಪದ ಕಲ್ಲಹಳ್ಳಿ ಗ್ರಾಮದ ಬಳಿ ಶನಿವಾರದಿಂದ ನಿಂತಿದ್ದ ಅನುಮಾನಸ್ಪದ ಕಾರಿನಲ್ಲಿ ವ್ಯಕ್ತಿಯ ಕೊಲೆ ನಡೆದಿರುವುದು ಪೊಲೀಸರ ತನಿಖೆಯಲ್ಲಿ ತಿಳಿದುಬಂದಿದೆ.

ಕೊಡಗು ಜಿಲ್ಲೆ ಸೋಮವಾರಪೇಟೆ ತಾಲ್ಲೂಕಿನ ಕಕ್ಕೆಹೊಳೆ ಜಂಗ್ಷನ್‌ನ ನಿವಾಸಿ ಸಂಪತ್ ಅಲಿಯಾಸ್ ಶಂಭು (30) ಮೃತ ಯುವಕ. ಬೇರೆ ಎಲ್ಲೋ ಆತನನ್ನು ಕೊಲೆ ಮಾಡಿ ಯಸಳೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಾರು ಹಾಗು ಶವವನ್ನು ಬಿಟ್ಟು ಹೋಗಿದ್ದಾರೆ ಎನ್ನಲಾಗಿದೆ.

ಕಲ್ಲಹಳ್ಳಿ ಬಳಿಯ ಪ್ರಪಾತದಲ್ಲಿ ಶವ ಪತ್ತೆಯಾಗಿದ್ದು, ಸಂಪತ್‌ನನ್ನು ಬರ್ಬರವಾಗಿ ಕೊಚ್ಚಿ ಕೊಲೆಗೈದಿದ್ದಾರೆ. ಕೊಲೆಯಾಗಿರುವ ಸಂಪತ್, ಕೆಲ ತಿಂಗಳ ಹಿಂದೆ ಸಿಎಂ ಸಿದ್ದರಾಮಯ್ಯ ಅವರ ಕೊಡಗು ಭೇಟಿ ವೇಳೆ ಕಾರಿನ ಮೇಲೆ ಮೊಟ್ಟೆ ಎಸೆದ ಪ್ರಕರಣದಲ್ಲಿ ಆರೋಪಿಯಾಗಿದ್ದ.

ಸ್ನೇಹಿತನ ಕಾರು: ಏ. 9 ರಂದು ಕುಶಾಲನಗರದ ಸ್ನೇಹಿತನಿಂದ ಸಂಪತ್ ಪಡೆದುಕೊಂಡು ಬಂದಿದ್ದ ಕಾರು, ಏ. 10 ರಂದು ಕಲ್ಲಹಳ್ಳಿ ಗ್ರಾಮದ ಬಳಿ ಪತ್ತೆಯಾಗಿತ್ತು. ಶನಿವಾರ ಬೆಳಿಗ್ಗೆ ಗ್ರಾಮದ ಜನವಸತಿ ಪ್ರದೇಶದಲ್ಲಿ ಸಂದೇಹಾಸ್ಪದವಾಗಿ ಕಾರು ನಿಂತಿರುವುದನ್ನು ಗ್ರಾಮಸ್ಥರು ಗಮನಿಸಿದ್ದರು. ಸಮೀಪದ ತೋಟದ ಕೆಲಸಕ್ಕೆ ಕಾರ್ಮಿಕರನ್ನು ಕರೆತಂದ ವಾಹನ ಚಾಲಕನೊಬ್ಬ ಕಾರಿನಲ್ಲಿ ರಕ್ತದ ಕಲೆಗಳಿರುವ ಬಗ್ಗೆ ಗ್ರಾಮಸ್ಥರಿಗೆ ನಂತರ ಯಸಳೂರು ಪೊಲೀಸರಿಗೆ ಮಾಹಿತಿ ನೀಡಿದ್ದರು.

ಸರ್ಕಲ್ ಇನ್ಸ್ಪೆಕ್ಟರ್ ಮತ್ತು ಸಬ್ ಇನ್ಸ್ಪೆಕ್ಟರ್ ಶ್ರೀನಿವಾಸ್ ನೇತೃತ್ವದ ತಂಡ, ಶ್ವಾನದಳ ಮತ್ತು ಬೆರಳಚ್ಚು ತಜ್ಞರೊಂದಿಗೆ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿ, ಮಹಜರು ನಡೆಸಿತ್ತು.

ಪ್ರಾಥಮಿಕ ತನಿಖೆಯಿಂದ ಕಾರು ಕುಶಾಲನಗರದ ವ್ಯಾಪಾರಿ ಜಾನ್ ಅವರಿಗೆ ಸೇರಿದ್ದು ಎಂದು ತಿಳಿದುಬಂದಿದೆ. ಇದನ್ನು ಸಂಪತ್ ಶನಿವಾರ ತೆಗೆದುಕೊಂಡು ಹೋಗಿದ್ದರು ಎನ್ನಲಾಗಿದೆ.

ಅದಾದ ಬಳಿಕ ಸಂಪತ್ ಮೊಬೈಲ್ ಸ್ವಿಚ್ ಆಫ್ ಆಗಿದ್ದು, ಅವರ ಬಗ್ಗೆ ಯಾವುದೇ ಮಾಹಿತಿ ಲಭ್ಯವಾಗಿರಲಿಲ್ಲ. ಪೊಲೀಸರು ಸಂಪತ್ ಅವರ ಕೊನೆಯ ಕರೆಗಳ ವಿವರ ಸಂಗ್ರಹಿಸಿ, ಹಿಂದಿನ ಗಲಾಟೆಗಳಲ್ಲಿ ಭಾಗಿಯಾಗಿದ್ದ ವ್ಯಕ್ತಿಗಳನ್ನು ವಿಚಾರಣೆಗೊಳಪಡಿಸಿದ್ದರು. ಆದರೂ ಯಾವುದೇ ಸುಳಿವು ಪತ್ತೆಯಾಗಿರಲಿಲ್ಲ.

ಈ ನಡುವೆ ಕುಶಾಲನಗರ ಠಾಣೆಯಲ್ಲಿ ಸಂಪತ್ ಕಾಣೆಯಾಗಿರುವ ಬಗ್ಗೆ ದೂರು ದಾಖಲು ದಾಖಲಾಗಿತ್ತು. ಇತ್ತ ಯಸಳೂರು ಪೊಲೀಸರು ಶೋಧ ಕಾರ್ಯ ನಡೆಸಿದ್ದರು. ಸತತ 4 ದಿನದ ಶೋಧ ಕಾರ್ಯದ ಬಳಿಕ ಸಂಪತ್ ಶವ ಪತ್ತೆಯಾಗಿದೆ. ಬೇರೆಡೆ ಕೊಲೆ ಮಾಡಿ ಮಲೆನಾಡು ಭಾಗದಲ್ಲಿ ಬಿಸಾಡಿ ಹೋಗಿದ್ದಾರೆ. ಇದೀಗ ಮೃತದೇಹವನ್ನು ಮಡಿಕೇರಿ ಜಿಲ್ಲಾಸ್ಪತ್ರೆಗೆ ರವಾನಿಸಲಾಗಿದೆ.

### ಅಕ್ರಮ ಸಂಬಂಧಕ್ಕೆ ಬಲಿಯಾದ ಪ್ರಾಣ..?

ಸಂಪತ್ ನಾಪತ್ತೆಯಾದ ನಂತರ ಆತನಿಗಾಗಿ ಹುಡುಕಾಟ ಆರಂಭಿಸಿದ ಪೊಲೀಸರಿಗೆ ಆತ ಕೊಲೆಯಾಗಿರುವ ಸೂಚನೆಗಳು ಗೋಚರವಾಗಿದ್ದವು. ಸಮಗ್ರ ತನಿಖೆಗಿಳಿದಾಗ ಆತ ಗ್ರಾಮದ ವ್ಯಕ್ತಿಯೊಬ್ಬರ ಪತ್ನಿಯೊಂದಿಗೆ ಅಕ್ರಮ ಸಂಬಂಧವಿರಿಸಿಕೊಂಡಿರುವ ವಿಷಯ ಗೊತ್ತಾಗಿತ್ತು.

ಆ ವೇಳೆಗೆ ಪೊಲೀಸರು ಸಂಪತ್ ಶನಿವಾರ ಕಾರಿನಲ್ಲಿ ಹೊರಟಾಗಿನ ಸಿಸಿಟಿವಿ ವಿಡಿಯೋಗಳನ್ನು ಪರಿಶೀಲಿಸಿದಾಗ ನಿರೀಕ್ಷೆಯಂತೆ ಸಂಪತ್‌ನ ಪ್ರೇಯಸಿ ಗಂಡನೇ ಆತನೊಂದಿಗೆ ಕಾರಿನಲ್ಲಿ ತೆರಳಿರುವುದು ಖಚಿತವಾಗಿದೆ ಎನ್ನಲಾಗಿದೆ.

## ತಹಶೀಲ್ದಾರ್ ನವೀನ್ ವಿರುದ್ಧ-ಪರ ಪ್ರತಿಭಟನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ತಹಶೀಲ್ದಾರ್ ನವೀನ್‌ಕುಮಾರ್ ಅವರ ವಿರುದ್ಧ ಬುಧವಾರ ಪಟ್ಟಣದಲ್ಲಿ ಪರ ವಿರೋಧ ಪ್ರತಿಭಟನೆಗಳು ನಡೆದವು.

ತಹಶೀಲ್ದಾರ್ ವಿರುದ್ಧ ಕ್ರಮ ಜರುಗಿಸಬೇಕೆಂದು ಭ್ರಷ್ಟಾಚಾರ ವಿರೋಧಿ ಆಂದೋಲನ ಸಮಿತಿ ತಾಲ್ಲೂಕು ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದಾಗ 15ಕ್ಕೂ ಹೆಚ್ಚು ಪ್ರತಿಭಟನಾಕಾರರನ್ನು ಬಂಧಿಸಿ ಬಿಡುಗಡೆ ಮಾಡಲಾಯಿತು. ಮತ್ತೊಂದು ಗುಂಪು ತಹಶೀಲ್ದಾರ್ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದು ವೈಯಕ್ತಿಕ ದ್ವೇಷದಿಂದ ಪ್ರತಿಭಟಿಸಲಾಗುತ್ತಿದೆ ಎಂದು ತಿರುಗೇಟು ನೀಡಿತು. ಇದರಿಂದ ಪಟ್ಟಣಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು.

ಭ್ರಷ್ಟಾಚಾರ ವಿರೋಧಿ ಆಂದೋಲನ ಸಮಿತಿ ಸಂಚಾಲಕ ಮಂಜುನಾಥ್ ಮಾತನಾಡಿ, ತಹಶೀಲ್ದಾರ್ ಅವರ ಭ್ರಷ್ಟತನದಿಂದ ಜನಸಾಮಾನ್ಯರು ನಲುಗುವಂತಾಗಿದೆ.

ಈ ಬಗ್ಗೆ ಸಂಸದರು, ಸಚಿವರು, ಕಂದಾಯ ಸಚಿವರು, ಶಾಸಕ, ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರೂ ಯಾವ ಪ್ರಯೋಜನವಾಗಿಲ್ಲ. ಇಂತಹ ಭ್ರಷ್ಟರನ್ನು ಸರ್ಕಾರವೇ ಪೋಷಣೆ ಮಾಡುತ್ತಿದೆ ಎಂದು ಆರೋಪಿಸಿದರು.

ತಹಶೀಲ್ದಾರ್ ವಿರುದ್ಧ ಸಾಕಷ್ಟು ಆರೋಪಗಳಿವೆ. ಮಹಿಳೆ ಬಗ್ಗೆ ಹಗುರವಾಗಿ ಮಾತನಾಡುವ ಅನಾಗರಿಕ ಅಧಿಕಾರಿ ತಾಲ್ಲೂಕಿಗೆ ಬೇಡ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಡಿವೈಎಸ್ಪಿ ಎನ್. ಕುಮಾರ್ ನೇತೃತ್ವದ ಸುಮಾರು 50 ಪೊಲೀಸರ ತಂಡ, ಪ್ರತಿಭಟನಾಕಾರರನ್ನು ಬಂಧಿಸಿ ನಂತರ ಬಿಡುಗಡೆ ಮಾಡಿದರು. ಸರ್ಕಲ್ ಇನ್ಸಪೆಕ್ಟರ್ ರಘುಪತಿ ಹಾಗೂ ಇತರ ಸಿಬ್ಬಂದಿ ಬಿಗಿ ಬಂದೋಬಸ್ತ್ ವಹಿಸಿದ್ದರು.

### ರಿಯಲ್ ಎಸ್ಟೇಟ್ ಕುಮ್ಮಕ್ಕು

ತಹಶೀಲ್ದಾರ್ ನವೀನ್‌ಕುಮಾರ್ ಉತ್ತಮ ಕೆಲಸ ಮಾಡುತ್ತಿದ್ದಾರೆಯಾದರೂ ರಿಯಲ್ ಎಸ್ಟೇಟ್ ಉದ್ಯಮಿಯ ಕುಮ್ಮಕ್ಕಿನಿಂದ ಅವರ ವಿರುದ್ಧ ಪ್ರತಿಭಟನೆ ನಡೆಸಲಾಗುತ್ತಿದೆ ಎಂದು ದಂಡೋರ ಮಂಜುನಾಥ್ ಆರೋಪಿಸಿದರು.


ರಾಮನಗರದಲ್ಲಿ ಕಳೆದ ವರ್ಷ ಮಾತನಾಡಿರುವ ಆಡಿಯೋವನ್ನು ಇಲ್ಲಿ ತಳುಕು ಹಾಕಿ ಬ್ಲಾಕ್ ಮೇಲ್ ಮಾಡುತ್ತಿರುವ ರಿಯಲ್ ಎಸ್ಟೇಟ್ ಉದ್ಯಮಿಯ ಕುಮ್ಮಕ್ಕಿನಿಂದ ಪ್ರತಿಭಟನೆ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ನಮ್ಮ ತಾಲ್ಲೂಕಿನ ರೈತರು ತಹಶೀಲ್ದಾರ್‌ಗೆ ಲಂಚ ಕೊಟ್ಟಿರುವ ಅಥವಾ ಲಂಚ ಕೇಳಿರುವ ವಿಡಿಯೋ ಇದ್ದರೆ ಬಹಿರಂಗಪಡಿಸಲಿ. ಗುಲಸಿಂದ ಮಹೇಶ್ ಎಂಬ ವ್ಯಕ್ತಿಯ ಕೋಟ್ಯಾಂತರ ರೂಪಾಯಿ ಬೆಲೆಬಾಳುವ ಆಸ್ತಿಯನ್ನು ದುರಸ್ತಿ ಮಾಡುವಂತೆ ತಹಶೀಲ್ದಾರ್‌ಗೆ ಒತ್ತಡ ಹೇರುತ್ತಿದ್ದಾನೆ. ಕಾನೂನು ಮೀರಿ ಅಧಿಕಾರಿ ಕೆಲಸ ಮಾಡುವುದಿಲ್ಲ ಎಂದಿದ್ದಕ್ಕೆ ಅವರ ಮೇಲೆ ಹೋರಾಟಗಾರರನ್ನು ಎತ್ತಿ ಕಟ್ಟಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೆಂಪೇಗೌಡ ವೇದಿಕೆ ರಾಜ್ಯಾಧ್ಯಕ್ಷ ಆನಂದ್ ಕಾಳೆನಹಳ್ಳಿ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಶ್ರವಣಬೆಳಗೊಳ ಲಕ್ಷ್ಮಣ್, ನೇರಳಕೆರೆ ವಿಶ್ವನಾಥ್, ವಿರೂಪಾಕ್ಷಪುರ ಪ್ರಕಾಶ್ ಹಾಗೂ ಇತರರಿದ್ದರು.

## ಪ್ರಧಾನಿ ಕುರಿತು ಹಗುರ ಹೇಳಿಕೆ: ಬಿಜೆಪಿ ಖಂಡನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಸಕಲೇಶಪುರ: ಪ್ರಧಾನಿ ನರೇಂದ್ರ ಮೋದಿ ಕುರಿತು ಅವಹೇಳನಕಾರಿಯಾಗಿ ಮಾತನಾಡಿರುವ ವ್ಯಕ್ತಿ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿ ತಾಲ್ಲೂಕು ಬಿಜೆಪಿ ಕಾರ್ಯಕರ್ತರು ನಗರ ಠಾಣೆಗೆ ಬುಧವಾರ ದೂರು ಸಲ್ಲಿಸಿದರು.

ಜಾಯ್ ಜಾಕೋಬ್ ಮನಕಿಲ್ ಎಂಬಾತ ತನ್ನ ಫೇಸ್‌ಬುಕ್ ಖಾತೆಯಲ್ಲಿ ಪ್ರಧಾನಿ ಕುರಿತು ಅವಹೇಳನಕಾರಿಯಾಗಿ ಮಾತನಾಡಿದ್ದಾನೆ. ವೈಚಾರಿಕ ವಿರೋಧ ಏನೇ ಇದ್ದರೂ ಒಳ್ಳೆಯ ರೀತಿಯಲ್ಲಿ ಪ್ರಶ್ನಿಸಬೇಕು. ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಮನಸಿಗೆ ಬಂದಂತೆ ದುರುಪಯೋಗ ಮಾಡಿಕೊಳ್ಳುವುದು ಶೋಭೆಯಲ್ಲ. ಇತ್ತೀಚಿನ ದಿನಗಳಲ್ಲಿ ನಾಯಕರ ಕುರಿತು ಹಗುರವಾಗಿ ಮಾತನಾಡುವುದು ಸಾಮಾನ್ಯವಾಗಿದೆ. ತಪ್ಪಿತಸ್ಥರನ್ನು ಕಠಿಣ ಶಿಕ್ಷೆಗೆ ಗುರಿಪಡಿಸುವ ಮೂಲಕ ಎಚ್ಚರಿಕೆ ನೀಡಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ತಾಲ್ಲೂಕು ಅಧ್ಯಕ್ಷ ವಳಲಹಳ್ಳಿ ಅಶ್ವಥ್, ನಗರ ಘಟಕ ಅಧ್ಯಕ್ಷ ಲೋಕೇಶ್, ಪ್ರಧಾನ ಕಾರ್ಯದರ್ಶಿಗಳಾದ ಅಗ್ನಿ ಸೋಮಶೇಖರ್, ಮಧು ಬೊಮ್ಮನಕೆರೆ, ತಾಲ್ಲೂಕು ರೈತ ಮೋರ್ಚಾ ಅಧ್ಯಕ್ಷ ಲೋಹಿತ್ ಕೌಡಳ್ಳಿ, ಮಾಜಿ ಜಿಲ್ಲಾ ಕಾರ್ಯಾಧ್ಯಕ್ಷ ಲೋಹಿತ್, ಮಾಜಿ ತಾಲ್ಲೂಕು ಅಧ್ಯಕ್ಷ ರಾಜ್ ಕುಮಾರ್ ಕ್ಯಾಮನಹಳ್ಳಿ, ಮುಖಂಡರಾದ ನಾಗೇಶ್, ಜೈ ಶಂಕರ್, ವಿನಯ್, ಶರತ್ ಹಾಜರಿದ್ದರು.

## ಲಿಂಗಾಯತರಿಗೆ ಅವಮಾನ: ಕ್ರಮಕ್ಕೆ ಒತ್ತಾಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ವೀರಶೈವ ಲಿಂಗಾಯತ ಸಮುದಾಯ ಕುರಿತು ಹುಲ್ಲೇನಹಳ್ಳಿ ಜಗದೀಶ್ ಎಂಬುವವರು ಹಗುರವಾಗಿ ಮಾತನಾಡಿದ್ದು ಅವರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿ ಅಖಿಲ ಭಾರತ ವೀರಶೈವ ಮಹಾಸಭಾ ಮುಖಂಡರು ಬುಧವಾರ ಗ್ರಾಮಾಂತರ ಠಾಣೆ ಪೊಲೀಸರಿಗೆ ಮನವಿ ಸಲ್ಲಿಸಿದರು.

ಪಿಎಸ್‌ಐ ಶಿವಾನಂದ ರುದ್ರಟಿ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ಮಹಾಸಭಾ ಜಿಲ್ಲಾ ಉಪಾಧ್ಯಕ್ಷ ಎ.ಬಿ. ಗುರುಸಿದ್ದೇಶ್, ವೀರಶೈವ ಲಿಂಗಾಯತ ಸಮುದಾಯ ಎಲ್ಲರೊಂದಿಗೆ ಉತ್ತಮ ಬಾಂಧವ್ಯ ಹೊಂದಿದೆ. ಹೀಗಿದ್ದರೂ ಹುಲ್ಲೇನಹಳ್ಳಿ ಜಗದೀಶ್ ಅವಾಚ್ಯ ಶಬ್ದಗಳಿಂದ ನಿಂದಿಸಿರುವ ಆಡಿಯೋ ವೈರಲ್ ಆಗಿದೆ. ತಕ್ಷಣವೇ ಆತನನ್ನು ಬಂಧಿಸಿ ಕಾನೂನು ಕ್ರಮ ಜರುಗಿಸಬೇಕು ಎಂದರು.



# ಬುದ್ಧ ಪ್ರತಿಮೆಗಾಗಿ ಮೂಲ ದೇಗುಲಕ್ಕೆ ಧಕ್ಕೆ ಯತ್ನ: ಆರೋಪ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಹೆತ್ತೂರು ಹೋಬಳಿ ಹಿರಿಯೂರು ಗ್ರಾಮದಲ್ಲಿ ಬುದ್ಧನ ಪ್ರತಿಮೆ ಪ್ರತಿಷ್ಠಾಪನೆಗೆ ಕೆಲವರು ಮೂಲ ದೇವಸ್ಥಾನಕ್ಕೆ ಧಕ್ಕೆ ತರಲು ಯತ್ನಿಸುತ್ತಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.



ಗ್ರಾಮದ ಸರ್ವೆ ನಂ. 125ರಲ್ಲಿರುವ ರಾಮೇಶ್ವರ ದೇವಸ್ಥಾನ, ಜೈನ ಬಸದಿ ಹಾಗು ದೇವಿರಮ್ಮ ಸುಗ್ಗಿ ಕಟ್ಟೆಗೆ ಹಲವಾರು ವರ್ಷಗಳಿಂದ ಗ್ರಾಮಸ್ಥರು ಧಾರ್ಮಿಕ ಕೈಂಕರ್ಯ ಮುಂದುವರೆಸಿಕೊಂಡು ಬಂದಿದ್ದಾರೆ. ಆದರೆ ಕಿಡಿಗೇಡಿಗಳು ದೇಗುಲ ಕಟ್ಟಡ ಜಾಗದಲ್ಲೇ ಬುದ್ಧ ಪ್ರತಿಮೆ ಸ್ಥಾಪನೆಗೆ ಮುಂದಾಗಿದ್ದಾರೆ ಎನ್ನಲಾಗಿದೆ.

ಇತ್ತೀಚೆಗೆ ಕೆಲವು ವ್ಯಕ್ತಿಗಳು ಗ್ರಾಮಸ್ಥರ ಭಾವನೆಗಳಿಗೆ ಧಕ್ಕೆ ತರುವಂತೆ ಸುಗ್ಗಿ ಕಟ್ಟೆಯಂತಹ ಪವಿತ್ರ ಸ್ಥಳವನ್ನು ವಿರೂಪಗೊಳಿಸುವ ಪ್ರಯತ್ನ ನಡೆಸಿದ್ದಾರೆ. ಈ ಪ್ರದೇಶದಲ್ಲಿ ಬುದ್ಧ ಪ್ರತಿಮೆಯನ್ನು ಸ್ಥಾಪಿಸಲು ಯತ್ನಿಸುತ್ತಿರುವುದು ಗ್ರಾಮಸ್ಥರ ಅಸಮಾಧಾನಕ್ಕೆ ಕಾರಣವಾಗಿದೆ. 2024ರ ನವೆಂಬರ್‌ನಲ್ಲಿ ಸ್ಥಳೀಯರ ಅನುಮತಿಯಿಲ್ಲದೆ ಹೊರಗಿನವರೊಂದಿಗೆ ಸೇರಿ ಗುಡ್ಡದಲ್ಲಿ ಬುದ್ಧ ಪ್ರತಿಮೆ ಇರಿಸಿದ್ದರು. ಅದರಿಂದ ಗ್ರಾಮದ ಸೌಹಾರ್ದತೆ ಹದಗೆಡಬಾರದು ಎಂಬ ಹಿನ್ನಲೆಯಲ್ಲಿ ದೂರು ನೀಡಿದ್ದೆವು. ಪೊಲೀಸ್ ಮತ್ತು ಕಂದಾಯ ಇಲಾಖೆ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಅಕ್ರಮವಾಗಿ ಇರಿಸಲಾದ ಪ್ರತಿಮೆಯನ್ನು ತೆರವುಗೊಳಿಸಿದ್ದರು. ಆದರೆ ಮೇ 9ರಂದು ಬುದ್ಧ ಪ್ರತಿಮೆ ಇರಿಸಲು ಯತ್ನಿಸಿ, ಗ್ರಾಮಸ್ಥರೊಂದಿಗೆ ಗಲಾಟೆ ಮತ್ತು ಘರ್ಷಣೆಗೆ ಕಾರಣರಾಗಿದ್ದಾರೆ ಎಂದು ತಿಳಿದುಬಂದಿದೆ.

ತಲೆತಲಾಂತರದಿಂದ ಧಾರ್ಮಿಕ ಸಾಮರಸ್ಯದಿಂದ ಬದುಕುತ್ತಿರುವ ಹಿರಿಯೂರು ಗ್ರಾಮದ ಜನರು, ತಮ್ಮ ಭಾವನೆಗಳಿಗೆ ಧಕ್ಕೆ ತರುವ ಕೃತ್ಯಗಳನ್ನು ಸಹಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಅಕ್ರಮವಾಗಿ ಬುದ್ಧ ಪ್ರತಿಮೆಯನ್ನು ಇರಿಸದಂತೆ ತಡೆಯುವುದರ ಜೊತೆಗೆ ಗ್ರಾಮದಲ್ಲಿ ಶಾಂತಿ ನೆಲೆಸುವ ವ್ಯವಸ್ಥೆಯನ್ನು ಕಲ್ಪಿಸಬೇಕೆಂದು ಸ್ಥಳೀಯರು ಕೋರಿದ್ದಾರೆ.

# ಅಸ್ಪೃಶ್ಯತೆ ನಿವಾರಣೆಗೆ ಗಮನ ಹರಿಸಿ: ಡಿಸಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಆಧುನಿಕತೆ ಎಷ್ಟೇ ಬೆಳೆದರೂ ಗ್ರಾಮೀಣ ಭಾಗದಲ್ಲಿ ಅಸ್ಪೃಶ್ಯತೆ ಆಚರಣೆಯಲ್ಲಿದ್ದು ಸಾಮಾಜಿಕ ಪಿಡುಗು ತೊಡೆದು ಹಾಕಲು ಅಧಿಕಾರಿಗಳು ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ಸಿ. ಸತ್ಯಭಾಮ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಂವಿಧಾನ ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸಿದೆ. ಗ್ರಾಮೀಣ ಭಾಗದಲ್ಲಿ ಅನಿಷ್ಟ ಪದ್ಧತಿ ಜೀವಂತವಾಗಿರುವುದು ವಿಷಾದನೀಯ. ಈ ಬಗ್ಗೆ ಅರಿವು ಕಾರ್ಯಕ್ರಮಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಯೋಜಿಸಬೇಕು ಎಂದರು.

ಜೀತ ವಿಮುಕ್ತರಿಗೆ ಪುನರ್ವಸತಿ ಕಲ್ಪಿಸುವ ನಿಟ್ಟಿನಲ್ಲಿ ಜಾಗ ಗುರುತಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.




ಕಟ್ಟಾಯ ಹೋಬಳಿ ಜವೇನಹಳ್ಳಿ ಗ್ರಾಮದಲ್ಲಿ ಅಂಬೇಡ್ಕರ್ ವಸತಿ ಶಾಲೆ ನಿರ್ಮಾಣಕ್ಕಾಗಿ ಜಾಗ ಗುರುತಿಸಲು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವೆಂಕಟೇಶ್ ನಾಯ್ಡು, ಭೂ ದಾಖಲೆಗಳ ಇಲಾಖೆ ಉಪ ನಿರ್ದೇಶಕ ಸುಜಯ್, ಸಮಾಜ ಕಲ್ಯಾಣಾಧಿಕಾರಿ ಪಿ. ದೂದ್‌ಪೀರ್, ಸಮಿತಿ ಸದಸ್ಯರಾದ ಮಲ್ಲೇಶ್, ನವಿನ್ ಸದಾ, ಶಿವಪ್ಪ ನಾಯಕ, ಶಿವಮ್ಮ ಮತ್ತಿತರರು ಹಾಜರಿದ್ದರು.

# ಹುತಾತ್ಮ ಯೋಧರಿಗೆ ಕದಂಬ ಸೇನೆ ಶ್ರದ್ಧಾಂಜಲಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಪಾಕಿಸ್ತಾನ ವಿರುದ್ಧ ನಡೆದ ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ ಹುತಾತ್ಮರಾದ ದೇಶದ ಐವರು ಸೈನಿಕರಿಗೆ ಕದಂಬ ಕನ್ನಡ ಸೇನೆಯಿಂದ ಬುಧವಾರ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಎದುರು ಶ್ರದ್ಧಾಂಜಲಿ ಸಲ್ಲಿಸಲಾಯಿತು.



ಕದಂಬ ಸೇನೆ ರಾಜ್ಯಾಧ್ಯಕ್ಷ ಬೇಕ್ರಿ ರಮೇಶ್ ಅವರು ಮಾತನಾಡಿ, ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತೀಯ ಸೇನೆಯು ಆಪರೇಷನ್ ಸಿಂಧೂರ ಮೂಲಕ ಶತ್ರು ರಾಷ್ಟ್ರಕ್ಕೆ ಬುದ್ಧಿ ಕಲಿಸಿದೆ. ಪಾಕಿಸ್ತಾನ ನಡೆಸಿದ ಶೆಲ್, ಡ್ರೋನ್ ದಾಳಿಯನ್ನು ಸಮರ್ಥವಾಗಿ ಹಿಮ್ಮೆಟ್ಟಿಸಿ ಭಾರತದ ಶಕ್ತಿಯನ್ನು ಜಗತ್ತಿಗೆ ತೋರಿಸಿಕೊಟ್ಟಿದೆ. ಲಷ್ಕರ್ ಎ-ತೈಬಾ ಮತ್ತು ಜೈಶ್-ಎ-ಮೊಹಮ್ಮದ್ ಗುಂಪುಗಳಿಗೆ ಸೇರಿದ ಒಂಬತ್ತು ಭಯೋತ್ಪಾದಕ ಶಿಬಿರಗಳನ್ನು ಗುರಿಯಾಗಿಸಿಕೊಂಡು ನಾಶಪಡಿಸಲಾಗಿದೆ. ನೂರಕ್ಕೂ ಹೆಚ್ಚು ಭಯೋತ್ಪಾದಕರನ್ನು ನಿರ್ಮೂಲನೆ ಮಾಡುವ ಮೂಲಕ ಮತ್ತು ಭಯೋತ್ಪಾದನೆಯನ್ನು ಸಹಿಸಲಾಗುವುದಿಲ್ಲ ಎಂಬ ದಿಟ್ಟ ಸಂದೇಶವನ್ನು ಜಗತ್ತಿಗೆ ರವಾನಿಸುವ ಮೂಲಕ, ಪ್ರಧಾನಿ ನರೇಂದ್ರ ಮೋದಿ ಭಯೋತ್ಪಾದಕರಿಗೆ ಪ್ರತೀಕಾರ ಮೂಲಕ ಮುಗ್ಧ ಹಿಂದೂಗಳು ಚೆಲ್ಲುವ ಪ್ರತಿ ರಕ್ತದ ಹನಿಗೂ ನ್ಯಾಯ ಒದಗಿಸಿದ್ದಾರೆ ಎಂದರು.

ನರೇಂದ್ರ ಮೋದಿ ಸೈನಿಕರಿಗೆ ಸಂಪೂರ್ಣ ಸ್ವಾತಂತ್ರ್ಯ ನೀಡಿದ್ದಾರೆ. ಭಾರತೀಯ ಸೇನೆಯು ಪಾಕಿಸ್ತಾನವನ್ನು ಪ್ರವೇಶಿಸಿ 26 ಅಮಾಯಕರ ಹತ್ಯೆಗೆ ಕಾರಣರಾದ ಭಯೋತ್ಪಾದಕರನ್ನು ನಿರ್ಮೂಲನೆ ಮಾಡಿದೆ. ಹೆಚ್ಚುತ್ತಿರುವ ಯುದ್ಧ ಉದ್ವಿಗ್ನತೆಯ ನಡುವೆ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರ (ಪಿಒಕೆ) ದಲ್ಲಿನ ಒಂಬತ್ತು ಭಯೋತ್ಪಾದಕ ಶಿಬಿರಗಳ ಮೇಲೆ ವಾಯುದಾಳಿ ನಡೆಸಿ, ಆಪರೇಷನ್ ಸಿಂಧೂರ ಮೂಲಕ ಭಯೋತ್ಪಾದನೆಯನ್ನು ಅದರ ಬೇರುಗಳಲ್ಲಿಯೇ ಹತ್ತಿಕ್ಕಿದೆ ಎಂದು ಹೇಳಿದರು.

ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ವೀರ ಯೋಧರಿಗೆ ಪ್ರತಿ ಮನೆ ಮನೆಯಲ್ಲಿ ಶ್ರದ್ಧಾಂಜಲಿ ಸಲ್ಲಿಸುವ ಮೂಲಕ ಅವರ ಆತ್ಮಕ್ಕೆ ಗೌರವ ಸಲ್ಲಿಸಬೇಕು ಎಂದರು.

ಕದಂಬ ಸೇನೆ ಜಿಲ್ಲಾ ಉಪಾಧ್ಯಕ್ಷ ಯಾಕುಬ್ ಖಾನ್ ಗೊರೂರು, ಸಕಲೇಶಪುರ ಅಧ್ಯಕ್ಷ ವಿಶ್ವಾಸ್ ಬಿ. ಗೌಡ, ಸಾಹಿತಿ ಗೊರೂರು ಅನಂತರಾಜು, ಆನಂದ ಪಟೇಲ್, ನಿವೃತ್ತ ಎಎಸ್‌ಐ ಶಿವನಂಜೇಗೌಡ, ರೈತ ಸಂಘದ ಹೋರಾಟಗಾರ ಪ್ರಕಾಶ್‌ಗೌಡ, ರಾಜ್ಯ ಸಮಿತಿ ಸದಸ್ಯ ರಾಮು ಚಿಕ್ಕೆಗೌಡನದೊಡ್ಡಿ, ಮಂಡ್ಯ ಜಿಲ್ಲೆ ಸಂಚಾಲಕ ಸಲ್ಮಾನ್ ಹಾಗು ಇತರರಿದ್ದರು.

# ಕಾವೇರಿ ನದಿಗೆ ನೆರವೇರಿದ 139ನೇ ಮಹಾಮಂಗಳಾರತಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ತಾಲ್ಲೂಕಿನ ರಾಮನಾಥಪುರ ದೇವಾಲಯಗಳ ಬಳಿ ಹರಿಯುತ್ತಿರುವ ಕಾವೇರಿ ನದಿಗೆ ಪ್ರತಿ ತಿಂಗಳ ಹುಣ್ಣಿಮೆ ದಿನ ಮಹಾಮಂಗಳಾರತಿ ಕಾರ್ಯ ಕೈಗೊಳ್ಳುವ ಮೂಲಕ ನದಿ ಸ್ವಚ್ಛತೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದು ಕಾವೇರಿ ನದಿ ಸ್ವಚ್ಛತಾ ಆಂದೋಲನ ಸಮಿತಿ ಜಿಲ್ಲಾಧ್ಯಕ್ಷ ಎಂ.ಎನ್. ಕುಮಾರಸ್ವಾಮಿ ತಿಳಿಸಿದರು.

ಗ್ರಾಮಸ್ಥರು, ಸಂಘ ಸಂಸ್ಥೆಗಳ ಮುಖಂಡರೊಂದಿಗೆ ಸ್ವಚ್ಛತಾ ಕಾರ್ಯ ಕೈಗೊಂಡ ಬಳಿಕ ನಡೆದ ಕಾವೇರಿ ನದಿಗೆ 139ನೇ ಮಹಾ ಮಂಗಳಾರತಿ ಪೂಜೆ ಸಲ್ಲಿಸಿ ಬಳಿಕ ಮಾತನಾಡಿದ ಅವರು, ಕಾವೇರಿ ನದಿ ದಡದಲ್ಲಿ ಹತ್ತಾರು ದೇವಸ್ಥಾನಗಳು ರಾಮನಾಥಪುರದಲ್ಲಿ ಮಾತ್ರ ಕಂಡುಬರುತ್ತವೆ. ಇದರಿಂದ ನಿತ್ಯವೂ ನೂರಾರು ಭಕ್ತರು, ಪ್ರವಾಸಿಗರು ಬಂದುಹೋಗುತ್ತಾರೆ. ವರ್ಷಕ್ಕೆ ಎರಡು ಬಾರಿ ನಡೆಯುವ ಸುಬ್ರಹ್ಮಣ್ಯ ಸ್ವಾಮಿ ರಥೋತ್ಸವ, ರಾಮೇಶ್ವರ ರಥೋತ್ಸವ, ಪಟ್ಟಾಭಿರಾಮ ಮತ್ತು ಅಗಸ್ತ್ಯೇಶ್ವರ ರಥೋತ್ಸವ ಕೂಡ ಜರುಗುತ್ತದೆ.



ಈ ಸಂದರ್ಭದಲ್ಲಿ ಅಪಾರ ಸಂಖ್ಯೆಯ ಭಕ್ತರು ಕಾವೇರಿ ನದಿಯಲ್ಲಿ ಪುಣ್ಯ ಸ್ನಾನ ಮಾಡಿ ಧರಿಸಿದ ಬಟ್ಟೆಯನ್ನು ನದಿಯಲ್ಲಿ ಹಾಕಿ ಹೊಸ ಮಡಿಬಟ್ಟೆಯಿಂದ ದೇವರ ದರ್ಶನ ಪಡೆಯುತ್ತಾರೆ. ಅಲ್ಲದೆ ದೂರದ ಊರುಗಳ ಜನರು ದೇವರ ಉತ್ಸವ ಮೂರ್ತಿಯನ್ನು ತಂದು ನದಿಯಲ್ಲಿ ಪೂಜೆ ಸಲ್ಲಿಸಿ ತೆರಳುತ್ತಾರೆ. ಈ ವೇಳೆ ಪೂಜೆಗೆಂದು ತಂದಿರುವ ಬಾಳೆ ಕಂದು, ಎಲೆ, ಹೂವು, ಬಟ್ಟೆ ಇತರೆ ಅನಗತ್ಯ ವಸ್ತುಗಳನ್ನು ನದಿಯಲ್ಲಿ ಬಿಟ್ಟು ಹೋಗುತ್ತಾರೆ. ಇವುಗಳು ನೀರಿನಲ್ಲಿ ಕೊಳೆತು ದುರ್ವಾಸನೆ ಬೀರುವ ಜೊತೆಗೆ ನಿಂತಿರುವ ನೀರು ಮಲೀನದಿಂದ ಕೂಡಿರಲು ಕಾರಣವಾಗುತ್ತಿದೆ. ಇವುಗಳನ್ನು ನದಿ ಸ್ವಚ್ಛತಾ ಆಂದೋಲನ ಸಮಿತಿ ವತಿಯಿಂದ ಸ್ವಚ್ಛಗೊಳಿಸುವ ಕಾಯಕ ನಡೆಯುತ್ತಿದೆ ಎಂದು ಹೇಳಿದರು. ಕಾವೇರಿ ನದಿ ನೀರು ಸದಾ ಸ್ವಚ್ಛವಾಗಿರುವಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಜವಬ್ದಾರಿಯಾಗಿದೆ. ಬೇಸಿಗೆ ಕಾಲವಾದರಿಂದ ನದಿಯಲ್ಲಿ ನೀರಿನ ಹರಿಯುವಿಕೆ ಕಡಿಮೆಯಾಗಿದೆ. ರಾಮೇಶ್ವರ ದೇವಾಲಯದ ಬಳಿ ಇರುವ ಮೀನಿನ ಕೊಳದಲ್ಲಿಯೂ ಸಹ ನೀರಿನ ಸಾಂದ್ರತೆ ಕಡಿಮೆ ಇದೆ. ಈ ಸಂದರ್ಭದಲ್ಲಿ ಅನಗತ್ಯ ತ್ಯಾಜ್ಯಗಳು ಹಾಕುತ್ತಿರುವುದು ಜಲಚರಗಳಿಗೆ ಕಂಟಕವುಂಟು ಮಾಡುತ್ತಿದೆ. ನದಿಯಿಂದ ನಿತ್ಯವೂ ಕುಡಿಯುವ ನೀರು ಸರಬರಾಜು ಆಗುತ್ತಿದೆ. ನದಿ ನೀರು ಮಲೀನದಿಂದ ಕೂಡಿರದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ ಆಗಬೇಕಿದೆ. ಬಹುತೇಕ ನದಿಯ ದಡದಲ್ಲಿ ತ್ಯಾಜ್ಯ ಹೇರಳವಾಗಿ ಬೆಳೆದಿರುವುದು ಸಹ ಕಂಡುಬಂದಿದೆ. ನದಿ ನೀರಿನ ತ್ಯಾಜ್ಯ ಮತ್ತು ದಡದಲ್ಲಿ ಹೇರಳವಾಗಿ ಬೆಳೆದಿರುವ ಗಿಡಗಂಟಿಗಳನ್ನು ಸ್ವಚ್ಛಗೊಳಿಸಲು ಹೆಚ್ಚಿನ ಸಂಖ್ಯೆಯಲ್ಲಿ ಜನರು ಕೈಜೋಡಿಸಬೇಕೆಂದು ಅವರು ಮನವಿ ಮಾಡಿದರು.

ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ನಾಗರಾಜು ಕೋಟೆಕಾರ್ ಮಾತನಾಡಿದರು. ನದಿ ಸ್ವಚ್ಛತಾ ಆಂದೋಲನ ಸಮಿತಿ ಕಾರ್ಯದರ್ಶಿ ಶಿವಪ್ಪ, ತಾಲ್ಲೂಕು ಅಧ್ಯಕ್ಷ ಸಿದ್ದರಾಜು, ಖಜಾಂಚಿ ಕೇಶವ, ಸದಸ್ಯರಾದ ಸುರೇಶ್, ಸೌಮ್ಯ, ಸುಧಾ ಮುಂತಾದವರು ಇದ್ದರು.

# ಸ್ಮಶಾನ ಜಾಗ ಒತ್ತುವರಿ ಆರೋಪ: ಪ್ರತಿಭಟನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಅರೇಹಳ್ಳಿ ಹೋಬಳಿ ಕಂದಾವರ ಗ್ರಾಮದಲ್ಲಿ ಸ್ಮಶಾನಕ್ಕೆ ಮೀಸಲಿಟ್ಟದ್ದ ಜಾಗ ಹಾಗೂ ರಸ್ತೆ ಒತ್ತುವರಿ ಮಾಡಲಾಗಿದೆ ಎಂದು ಆರೋಪಿಸಿ ಗ್ರಾಮಸ್ಥರು ಶವದೊಂದಿಗೆ ಬುಧವಾರ ಪ್ರತಿಭಟನೆ ನಡೆಸಿದರು.

ಗ್ರಾಮದ ಸ.ನಂ. 134ರಲ್ಲಿ ಪರಿಶಿಷ್ಟ ಜಾತಿಗೆ 10 ಗುಂಟೆ ಜಾಗವನ್ನು 50 ವರ್ಷದಿಂದ ಸ್ಮಶಾನಕ್ಕಾಗಿ ಮೀಸಲಿಡಲಾಗಿತ್ತು. ಕಾಲಕ್ರಮೇಣ ಸಂಪೂರ್ಣ ಜಾಗವನ್ನು ಒತ್ತುವರಿ ಮಾಡಿಕೊಂಡು ಕೇವಲ 1 ಗುಂಟೆ ಮಾತ್ರ ಬಿಟ್ಟಿದ್ದಾರೆ. ಸ.ನಂ. 36, 37, 38 ರಲ್ಲಿ 1 ಎಕರೆ ಜಾಗವನ್ನು ವಿವಿಧ ಜನಾಂಗಕ್ಕೆ ರುದ್ರಭೂಮಿಗಾಗಿ ಮೀಸಲಿಟ್ಟಿದ್ದಾರೆ. ಅದು ಸಹ ಒತ್ತುವರಿಯಾಗಿದ್ದು ಶವ ಸಂಸ್ಕಾರಕ್ಕೆ ತೊಂದರೆಯಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಸ್ಮಶಾನ ಜಾಗ ಬಿಡಿಸಿಕೊಡದಿದ್ದರೆ ತಾಲ್ಲೂಕು ಪಂಚಾಯಿತಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಗ್ರಾಮ ಪಂಚಾಯಿತಿ ಸದಸ್ಯ ಅಜಿತ್ ಮಾತನಾಡಿ, ಗ್ರಾಮದಲ್ಲಿ ಒಕ್ಕಲಿಗ, ವೀರಶೈವ, ಪರಿಶಿಷ್ಟ ಜಾತಿಯವರು ಸಹೋದರರಂತೆ ಬಾಳುತ್ತಿದ್ದೇವೆ. ಆದರೆ ಒಂದು ವಾರದ ಹಿಂದೆ ದ್ಯಾವಯ್ಯ ಎಂಬುವವರು ಅಕಾಲಿಕವಾಗಿ ಮರಣ ಹೊಂದಿದಾಗ ಶವ ಸಂಸ್ಕಾರ ಮಾಡಲು ಜಾಗ ಹಾಗು ರಸ್ತೆ ಇಲ್ಲದೆ ಸುಮಾರು 4 ಕಿ.ಮೀ. ಶವ ಹೊತ್ತು ಸಂಸ್ಕಾರ ಮಾಡಲಾಗಿದೆ. ಬುಧವಾರ ವೃದ್ಧೆ ಸಾವನ್ನಪ್ಪಿದ್ದು ಅವರ ಅಂತ್ಯಕ್ರಿಯೆಗೆ ಜಾಗ ಇಲ್ಲವಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಬರುವ ವರೆಗೆ ಶವ ಮೇಲೆತ್ತುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮದ ಪುಟ್ಟಸ್ವಾಮಿಗೌಡ, ರವಿ, ಯೊಗೇಶ್, ನಾಗೇಶ್, ಪ್ರದೀಪ್, ಪುಟ್ಟರಾಜು, ರಘು, ಗ್ರಾಮ ಪಂಚಾಯಿತಿ ಸದಸ್ಯೆ ರಮ್ಯ ಲೋಕೇಶ್, ಭೂಮಾಪಕರಾದ ಗಂಗಾಧರ್, ವಿ.ಎ. ಮಲ್ಲಿಕಾರ್ಜುನ ಇತರರಿದ್ದರು.

# ಹೊಲೆಯ ಜಾತಿ ನಮೂದಿಸಲು ಮನವಿ




ಸಕಲೇಶಪುರ: ಒಳಮೀಸಲಾತಿ ಜಾರಿಗಾಗಿ ನಡೆಯುತ್ತಿರುವ ಜಾತಿ ಗಣತಿಯಲ್ಲಿ ಸಮೀಕ್ಷೆದಾರರು ಮನೆಗೆ ಭೇಟಿ ನೀಡಿದಾಗ ಹೊಲೆಯ ಜಾತಿಯನ್ನು ಸ್ಪಷ್ಟವಾಗಿ ಮತ್ತು ಪ್ರಾಮಾಣಿಕವಾಗಿ ನಮೂದಿಸಬೇಕು ಎಂದು ದಲಿತ ಮುಖಂಡ ರಾಜು ಗೊರೂರು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ ರಾಜ್ಯ ಸರ್ಕಾರ ಒಳಮೀಸಲಾತಿ ಜಾರಿಗೆ ಕ್ರಮ ಕೈಗೊಂಡಿದೆ. ಆದರೆ, ಸರಿಯಾದ ಅಂಕಿಅಂಶಗಳ ಕೊರತೆಯಿಂದ ಮೀಸಲಾತಿ ಹಂಚಿಕೆಯಲ್ಲಿ ತೊಂದರೆ ಎದುರಾಗಿವೆ. ಸಮಸ್ಯೆ ಬಗೆಹರಿಸಲು ರಾಜ್ಯ ಸರ್ಕಾರ ಜಾತಿ ಗಣತಿಯನ್ನು ಆರಂಭಿಸಿದೆ ಎಂದರು.

ಕಾಂಗ್ರೆಸ್ ಯುವ ಘಟಕದ ಅಧ್ಯಕ್ಷ ಹೆನ್ನಲಿ ಧರ್ಮು ಅವರು ಮಾತನಾಡಿ, ಹೊಲೆಯ ಮತ್ತು ಮಾದಿಗ ಉಪಜಾತಿಗಳನ್ನು ನಿಖರವಾಗಿ ದಾಖಲಿಸಬೇಕು ಎಂದು ಕೋರಿದರು.

ರವಿ ಕಾರ್ಜುವಳ್ಳಿ, ಆನಂದ್ ತಿಮ್ಮನಹಳ್ಳಿ, ಸರೋಜ ಬಾಳ್ಳುಪೇಟೆ ಹಾಗೂ ಇತರರಿದ್ದರು.

# ಜಿಲ್ಲೆಯ ವಿವಿಧೆಡೆ ವರುಣಾರ್ಭಟ

ಕನ್ನಡ ಪೋಸ್ಟ್ ನ್ಯೂಸ್

ಹಾಸನ: ಜಿಲ್ಲೆಯಾದ್ಯಂತ ವರುಣನ ಅಬ್ಬರ ಮುಂದುವರಿದಿದ್ದು, ಹಾಸನ, ಬೇಲೂರು ಹಾಗೂ ಅರಸೀಕೆರೆ ತಾಲ್ಲೂಕುಗಳಲ್ಲಿ ಬುಧವಾರ ಭಾರೀ ಮಳೆಯಾಗಿದೆ.




ಮಿಂಚು, ಗುಡುಗು, ಸಿಡಿಲು ಸಹಿತ ಸುರಿಯುತ್ತಿರುವ ವರ್ಷಧಾರೆಯಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ. ಹಾಸನ ನಗರದಲ್ಲಿ ಧಾರಾಕಾರ ಮಳೆ ಸುರಿದಿದ್ದು ವಾಹನ ಸವಾರರು, ಬೀದಿ ಬದಿ ವ್ಯಾಪಾರಸ್ಥರು ಮತ್ತು ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸಿದರು. ಹಲವೆಡೆ ರಸ್ತೆ ಬದಿ ಮರಗಳ ರೆಂಬೆಕೊಂಬೆಗಳು ಮುರಿದು ಬಿದ್ದಿವೆ.

ಆದರೆ, ಈ ಉತ್ತಮ ಮಳೆಯಿಂದ ಕೃಷಿ ಚಟುವಟಿಕೆಗಳು ಚುರುಕುಗೊಂಡಿವೆ. ಈಗಾಗಲೇ ಬಿತ್ತನೆ ಕಾರ್ಯ ಆರಂಭಿಸಿರುವ ರೈತರ ಮೊಗದಲ್ಲಿ ಮಂದಹಾಸ ಮೂಡಿದೆ. ಮಳೆಯಿಂದ ಕೃಷಿಗೆ ಜೀವ ಬಂದಿದೆ.

# ಇತಿಹಾಸದಲ್ಲಿ ಈ ದಿನ

## ಮೇ -15

**1857:** ಸಿಪಾಯಿಗಳ ಪ್ರಥಮ ಸ್ವಾತಂತ್ರ್ಯ ಸಮರ: ಈ ದಿನದಂದು ಉತ್ತರ ಭಾರತದ ಹಲವೆಡೆ ಬಂಡಾಯದ ಅಲೆ ಹರಡಿತ್ತು. ಇದನ್ನು ಬ್ರಿಟಿಷ್ ಇತ್ಯಾದಿ ಮ್ಯೂಟಿನಿ ಎನ್ನುತ್ತಿದ್ದರು. ಆದರೆ ಇದು ಭಾರತದ ಮೊದಲ ಸ್ವಾತಂತ್ರ್ಯ ಹೋರಾಟ ಎಂಬ ಗುರುತಿದೆ. ಮೇ ತಿಂಗಳಲ್ಲಿ ವಿಶೇಷವಾಗಿ ಮೇ 15 ರಂದು ಮೀರತ್‌ನಿಂದ ದೆಹಲಿ ಕಡೆಗೆ ಸಿಪಾಯಿಗಳು ಮುನ್ನಡೆಸಿದ ಹೋರಾಟ ಆಗಿತ್ತು.

**1907:** ಜಮಾಲುದ್ದಿನ್ ಅಪಘಾನಿ ಅವರ ಐಡಿಯಾಲಜಿಗೆ ಪ್ರಭಾವಿತರಾದ ಹಲವು ಭಾರತೀಯ ಮುಸ್ಲಿಂ ಚಿಂತಕರು ಈ ದಿನದಿಂದ ಟಿಪಾನಿಸ್‌ಲಾಮಿಕ್‌ಟಿ ಚಳವಳಿ ಆರಂಭಿಸಿದರು.

**1958:** ಭಾರತದ ಮೊದಲ ಭೂಗರ್ಭ ಶಕ್ತಿಯ ತಂತ್ರಜ್ಞಾನ ಪರಿಕಲ್ಪನೆಗೆ ಕೇಂದ್ರ ಸರ್ಕಾರದಿಂದ ಅನುಮೋದನೆ.

**1975:** ಭಾರತದಲ್ಲಿ ಟೆಲಿವಿಷನ್ ಸೇವೆ (Doordarshan)ಯ ವ್ಯಾಪ್ತಿ ಹೆಚ್ಚು ಮಾಡಲು ಯೋಜನೆಗೆ ಮಂಜೂರಾತಿ.

**1996:** ಎಚ್.ಡಿ. ದೇವೇಗೌಡ ಅವರು ಭಾರತದ ಪ್ರಧಾನಮಂತ್ರಿಯಾಗಿ ಆಯ್ಕೆಯಾಗುವ ಪ್ರಕ್ರಿಯೆ ಆರಂಭವಾಯಿತು. ಅವರಿಗೆ ಮಾಯಾವತಿಯ ಬೆಂಬಲ ಮತ್ತು ರಾಜಕೀಯ ತಂತ್ರದಿಂದ ನೇಮಕದ ಮಾರ್ಗ ತೆರೆಯಿತು.

### ಜನನ

**1918:** ಮದನ್ ಲಾಲ್ ಧಿಂಗ್ರಾ, ಬ್ರಿಟಿಷ್ ಸರ್ಕಾರದ ವಿರುದ್ಧ ಹೋರಾಡಿದ ಕ್ರಾಂತಿಕಾರಿ (ಹೆಚ್ಚಾಗಿ ಪಂಜಾಬ್ ಹಾಗೂ ಲಂಡನ್‌ನಲ್ಲಿ ಚಟುವಟಿಕೆ ನಡೆಸಿದರು).

**1931:** ಬಾಲಕೃಷ್ಣ ದೋಸಾ, ಭಾರತೀಯ ವಾಸ್ತುಶಿಲ್ಪಿ, ಪ್ರಶಸ್ತಿ ಪುರಸ್ಕೃತರೂ, ಪ್ರಿಟ್ಜರ್ ಪ್ರಶಸ್ತಿ ವಿಜೇತ.

**1950:** ಚಂದನ್ ಮಿತ್ರಾ, ಹಿರಿಯ ಪತ್ರಕರ್ತ ಮತ್ತು ರಾಜಕಾರಣಿ.

### ಮರಣ

**1965:** ಪಂಡಿತ್ ಶ್ರೀರಾಮ ಶರ್ಮಾ, ಆಲ್ ವರ್ಲ್ಡ್ ಗಾಯತ್ರಿ ಪರ್ವಾರ್ ಸ್ಥಾಪಕ, ಲೇಖಕ ಮತ್ತು ಧಾರ್ಮಿಕ ಚಿಂತಕ.

# ಸಿತಾರೆ ಜಮೀನ್ ಪರ್: ಅಮಿರ್ ಖಾನ್‌ನ ಮತ್ತೊಂದು ಹೃದಯಸ್ಪರ್ಶಿ ಕಥನ ಸಿದ್ಧ

ಕನ್ನಡ ಪೋಸ್ಟ್ ವಿಶೇಷ

ಬಾಲಿವುಡ್‌ನ ಮಿಸ್ಟರ್ ಪರ್ಫೆಕ್ಷನಿಸ್ಟ್ ಎಂದೇ ಖ್ಯಾತರಾದ ಅಮಿರ್ ಖಾನ್, ತಮ್ಮ ಪ್ರತಿಯೊಂದು ಚಿತ್ರದ ಮೂಲಕ ಸಾಮಾಜಿಕ ಸಂದೇಶವನ್ನು ಒಡ್ಡುವುದರಲ್ಲಿ ಮಾಸ್ಟರ್ ಎನಿಸಿಕೊಂಡವರು. 2007ರಲ್ಲಿ ಬಿಡುಗಡೆಯಾದ ತಾರೆ ಜಮೀನ್ ಪರ್ ಚಿತ್ರದ ಮೂಲಕ ಡಿಸ್ಲೆಕ್ಸಿಯಾ ಎಂಬ ಕಲಿಕೆಯ ಸಮಸ್ಯೆಯ ಬಗ್ಗೆ ಜಾಗೃತಿ ಮೂಡಿಸಿದ್ದ ಅಮಿರ್ ಈಗ ಅದೇ ಶೈಲಿಯ ಮತ್ತೊಂದು ಭಾವನಾತ್ಮಕ ಕಥೆಯಾದ ಸಿತಾರೆ ಜಮೀನ್ ಪರ್ ಮೂಲಕ ಬೆಳ್ಳಿತೆರೆಗೆ ಮರಳುತ್ತಿದ್ದಾರೆ. ಈ ಚಿತ್ರವು ಜೂನ್ 20, 2025ರಂದು ಬಿಡುಗಡೆಯಾಗಲಿದ್ದು, ಈಗಾಗಲೇ ಚಿತ್ರದ ಟ್ರೇಲರ್ ಮತ್ತು ಪೋಸ್ಟರ್‌ಗಳು ಅಭಿಮಾನಿಗಳಲ್ಲಿ ಭಾರೀ ಕುತೂಹಲವನ್ನು ಹುಟ್ಟುಹಾಕಿವೆ.

## ಚಿತ್ರದ ಕಥಾಹಂದರ

ಸಿತಾರೆ ಜಮೀನ್ ಪರ್ ಚಿತ್ರವು 2018ರ ಸ್ಪ್ಯಾನಿಷ್ ಚಿತ್ರ ಚಾಂಪಿಯನ್ಸ್‌ನಿಂದ ಪ್ರೇರಿತವಾಗಿದೆ. ಈ ಚಿತ್ರದಲ್ಲಿ ಅಮಿರ್ ಖಾನ್ ಗುಲ್ಶನ್ ಎಂಬ ಬಾಸ್ಕೆಟ್ ಬಾಲ್ ಕೋಚ್‌ನ ಪಾತ್ರವನ್ನು ನಿರ್ವಹಿಸಿದ್ದಾರೆ. ಈ ಪಾತ್ರವು ತಾರೆ ಜಮೀನ್ ಪರ್‌ನ ರಾಮ್ ಶಂಕರ್ ನಿಕುಂಭ್‌ನಿಂದ ಸಂಪೂರ್ಣ ಭಿನ್ನವಾಗಿದೆ. ನಿಕುಂಭ್ ಸಂವೇದನಾಶೀಲ ಮತ್ತು ತಾಳ್ಮೆಯ ಶಿಕ್ಷಕನಾಗಿದ್ದರೆ, ಗುಲ್ಶನ್ ಒರಟು, ಕಠಿಣ ಮತ್ತು ಎಲ್ಲರನ್ನೂ ಕೀಳಾಗಿ ಮಾತನಾಡಿಸುವ ಸ್ವಭಾವದವನು. ಆದರೆ, ಈ ಕಠಿಣ ಹೊರಪದರದ ಒಳಗೆ ಅವನ ಮಾನವೀಯತೆ ಮತ್ತು ಸಹಾನುಭೂತಿಯನ್ನು ಚಿತ್ರವು ಕ್ರಮೇಣ ಬಿಚ್ಚಿಡುತ್ತದೆ.

ಚಿತ್ರದ ಕೇಂದ್ರ ಬಿಂದುವೆಂದರೆ, ಗುಲ್ಶನ್ ತರಬೇತಿಯನ್ನು ನೀಡುವ ಅಂಗವಿಕಲರ ಬಾಸ್ಕೆಟ್‌ಬಾಲ್ ತಂಡ. ಈ ತಂಡದ ಹತ್ತು ಆಟಗಾರರು ತಮ್ಮ ದೈಹಿಕ ಮತ್ತು ಮಾನಸಿಕ ಸವಾಲುಗಳನ್ನು ಮೀರಿ ತಮ್ಮ ಕನಸುಗಳನ್ನು ಸಾಕಾರಗೊಳಿಸಲು ಶ್ರಮಿಸುತ್ತಾರೆ. ಈ ಪಯಣದಲ್ಲಿ ಗುಲ್ಶನ್‌ನ ಜೀವನವೂ ರೂಪಾಂತರಗೊಳ್ಳುತ್ತದೆ. ಚಿತ್ರವು ಕೇವಲ ಕ್ರೀಡಾ ನಾಟಕವಲ್ಲ, ಬದಲಿಗೆ ಸಾಮಾಜಿಕ ಸಮಾನತೆ, ಸ್ವಾಭಿಮಾನ ಮತ್ತು ಸವಾಲುಗಳನ್ನು ಎದುರಿಸುವ ಧೈರ್ಯದ ಬಗ್ಗೆ ಮಾತನಾಡುತ್ತದೆ.

## ತಾರಾಗಣ ಮತ್ತು ತಾಂತ್ರಿಕ ತಂಡ

ಅಮಿರ್ ಖಾನ್‌ರ ಜೊತೆಗೆ ಜೆನಿಲಿಯಾ ದೇಶಮುಖ್ ಈ ಚಿತ್ರದಲ್ಲಿ ಪ್ರಮುಖ ಪಾತ್ರವೊಂದನ್ನು ನಿರ್ವಹಿಸಿದ್ದಾರೆ. ಇದರ ಜೊತೆಗೆ ಅಮಿರ್ ಖಾನ್‌ರ ನಿರ್ಮಾಣ ಸಂಸ್ಥೆಯಿಂದ 10 ಹೊಸ ಕಲಾವಿದರಿಗೆ ಈ ಚಿತ್ರದಲ್ಲಿ ಅವಕಾಶ ನೀಡಲಾಗಿದೆ. ಇದು ಚಿತ್ರಕ್ಕೆ ತಾಜಾತನವನ್ನು ತಂದಿದೆ. ಚಿತ್ರಕ್ಕೆ ಆರ್.ಎಸ್. ಪ್ರಸನ್ನ ನಿರ್ದೇಶನವಿದ್ದು, ಅಮಿರ್ ಖಾನ್ ಮತ್ತು ಕಿರಣ್ ರಾವ್ ಜೊತೆಗೆ ಅಪರ್ಣಾ ಪುರೋಹಿತ್ ನಿರ್ಮಾಪಕರಾಗಿದ್ದಾರೆ.




## ಟ್ರೇಲರ್‌ನಿಂದ ಕಂಗೊಳಿಸಿದ ನಿರೀಕ್ಷೆ

ಮೇ 13, 2025ರಂದು ಬಿಡುಗಡೆಯಾದ ಸಿತಾರೆ ಜಮೀನ್ ಪರ್ ಟ್ರೇಲರ್ ಚಿತ್ರದ ಕಥಾಹಂದರದ ಒಂದು ಝಲಕ್‌ನ್ನು ಒಡ್ಡಿದೆ. ಟ್ರೇಲರ್‌ನಲ್ಲಿ ಅಮಿರ್‌ನ ಒರಟು ಪಾತ್ರ, ತಂಡದ ಆಟಗಾರರ ಭಾವನಾತ್ಮಕ ಕ್ಷಣಗಳು ಮತ್ತು ಕ್ರೀಡಾ ರೋಮಾಂಚನವು ಸಮತೋಲನವಾಗಿ ಕಾಣಿಸಿಕೊಂಡಿದೆ. ಟ್ರೇಲರ್‌ಗೆ ರಿತೇಶ್ ದೇಶಮುಖ್‌ನಂತಹ ಗಣ್ಯರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಆದರೆ, ಕೆಲವು ವಿಮರ್ಶಕರು ಅಮಿರ್‌ನ ನಟನೆಯು ಟ್ರೇಲರ್‌ನಲ್ಲಿ ಆಕರ್ಷಕವಾಗಿಲ್ಲ ಎಂದು ಟೀಕಿಸಿದ್ದಾರೆ. ಆದಾಗ್ಯೂ, ಆಮಿರ್‌ನ ಚಿತ್ರಗಳು ಯಾವಾಗಲೂ ಟ್ರೇಲರ್‌ಗಿಂತ ಹೆಚ್ಚಿನದನ್ನು ನೀಡುವುದರಿಂದ, ಅಭಿಮಾನಿಗಳು ಚಿತ್ರದ ಮೇಲೆ ದೊಡ್ಡ ಭರವಸೆಯನ್ನಿಟ್ಟಿದ್ದಾರೆ.

## ವಿವಾದದ ಸುಳಿಯಲ್ಲಿ ಚಿತ್ರ

ಚಿತ್ರದ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಕೆಲವು ವಿವಾದಾತ್ಮಕ ಚರ್ಚೆಗಳು ನಡೆದಿವೆ. ಕೆಲವರು ಚಿತ್ರವನ್ನು ನಿಷೇಧಿಸಬೇಕೆಂದು ಆಗ್ರಹಿಸಿದ್ದಾರೆ. ಆದರೆ ಈ ಆರೋಪಗಳಿಗೆ ಸ್ಪಷ್ಟ ಕಾರಣಗಳು ಇನ್ನೂ ಬಹಿರಂಗಗೊಂಡಿಲ್ಲ. ಅಮಿರ್ ಖಾನ್‌ನ ಚಿತ್ರಗಳು ಯಾವಾಗಲೂ ಚರ್ಚೆಗೆ ಗ್ರಾಸವಾಗಿರುವುದರಿಂದ, ಇದು ಚಿತ್ರದ ಮೇಲಿನ ಗಮನವನ್ನು ಇನ್ನಷ್ಟು ಹೆಚ್ಚಿಸಿದೆ.

## ಟ್ರ್ಯಾಕ್‌ಗೆ ಮರಳುವ ಆಸೆ

ಗತ ಕೆಲವು ವರ್ಷಗಳಲ್ಲಿ ಥಗ್ಸ್ ಆಫ್ ಹಿಂದುಸ್ತಾನ್ ಮತ್ತು ಲಾಲ್ ಸಿಂಗ್ ಚಡ್ಡಾ ಚಿತ್ರಗಳು ಬಾಕ್ಸ್ ಆಫೀಸ್‌ನಲ್ಲಿ ನಿರೀಕ್ಷಿತ ಯಶಸ್ಸನ್ನು ಕಾಣದಿರುವುದರಿಂದ, ಸಿತಾರೆ ಜಮೀನ್ ಪರ್ ಮೇಲೆ ಅಮಿರ್ ಖಾನ್‌ಗೆ ದೊಡ್ಡ ಭರವಸೆಯಿದೆ. ಗಜಿನಿ, 3 ಇಡಿಯಟ್ಸ್, ಪಿಕೆ ಮತ್ತು ದಂಗಲ್‌ನಂತಹ ಸೂಪರ್‌ಹಿಟ್ ಚಿತ್ರಗಳ ಮೂಲಕ ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿರುವ ಅಮಿರ್ ಈ ಚಿತ್ರದ ಮೂಲಕ ಮತ್ತೊಮ್ಮೆ ತಮ್ಮ ಗೆಲುವಿನ ಓಟವನ್ನು ಮುಂದುವರಿಸಲು ಉತ್ಸುಕರಾಗಿದ್ದಾರೆ.

## ಪ್ರೇಕ್ಷಕರಿಗೆ ಸಂದೇಶ

ಸಿತಾರೆ ಜಮೀನ್ ಪರ್ ಕೇವಲ ಒಂದು ಮನರಂಜನಾತ್ಮಕ ಚಿತ್ರವಲ್ಲ, ಬದಲಿಗೆ ಅಂಗವಿಕಲರ ಸಾಮರ್ಥ್ಯವನ್ನು ಗುರುತಿಸುವ ಮತ್ತು ಸಮಾಜದಲ್ಲಿ ಸಮಾನತೆಯನ್ನು ಒತ್ತಿಹೇಳುವ ಕನ್ನಡಿ. ಆಮಿರ್ ಖಾನ್‌ನ ಚಿತ್ರಗಳಂತೆ ಈ ಚಿತ್ರವೂ ಪ್ರೇಕ್ಷಕರ ಮನಸ್ಸಿನಲ್ಲಿ ಆಳವಾದ ಪರಿಣಾಮವನ್ನು ಬೀರಲಿದೆ ಎಂಬುದರಲ್ಲಿ ಸಂದೇಹವಿಲ್ಲ. ಈ ಚಿತ್ರವು ಕೇವಲ ಸಿನಿಮಾ ರಸಿಕರಿಗೆ ಮಾತ್ರವಲ್ಲ, ಸಾಮಾಜಿಕ ಸಂದೇಶವನ್ನು ಅರ್ಥಮಾಡಿಕೊಳ್ಳಲು ಬಯಸುವ ಎಲ್ಲರಿಗೂ ಒಂದು ಅಮೂಲ್ಯ ಅನುಭವವಾಗಲಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248